ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ          ದಿನಾಂಕ : DATE : 03/03/2020

# ಉಪ ಸ್ಪೀಕರ್ ಕೃಷ್ಣಾರೆಡ್ಡಿ ರಾಜೀನಾಮೆ?

## ರಾಜೀನಾಮೆ ನೀಡದಿದ್ದರೆ ಬಿಜೆಪಿಯಿಂದ ಅವಿಶ್ವಾಸ ಮಂಡನೆ

## ಬಿಜೆಪಿ ಸದಸ್ಯ ಆನಂದ್ ಮಾಮನಿಗೆ ಉಪ ಸಭಾಧ್ಯಕ್ಷ ಸ್ಥಾನ?

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ಆಡಳಿತಾರೂಢ ಬಿಜೆಪಿ ವಿಧಾನಸಭೆಯಲ್ಲಿ ಬಹುಮತ ಹೊಂದಿರುವ ಹಿನ್ನೆಲೆಯಲ್ಲಿ ತಮ್ಮ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವ ಸಾಧ್ಯತೆ ಇದೆ ಎಂಬುದನ್ನು ಅರಿತ ವಿಧಾನಸಭೆ ಉಪ ಸಭಾಧ್ಯಕ್ಷರಾದ ಜೆಡಿಎಸ್‌ನ ಜೆ.ಕೆ. ಕೃಷ್ಣಾರೆಡ್ಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವುದು ಬಹುತೇಕ ಖಚಿತವಾಗಿದೆ.

ಸಚಿವ ಸ್ಥಾನ ವಂಚಿತರಾದ ಪಕ್ಷದ ಹಿರಿಯ ಶಾಸಕರನ್ನು ಸಮಾಧಾನ ಮಾಡಲು ಉಪಸಭಾಧ್ಯಕ್ಷ ಸ್ಥಾನ ನೀಡಲು ಬಿಜೆಪಿ ತೀರ್ಮಾನಿಸಿದೆ ಎಂದು ಹೇಳಲಾಗಿದೆ. ಹಿರಿಯ ಶಾಸಕ ಆನಂದ್ ಸಿ.ಮಾಮನಿ ಅವರನ್ನು ಉಪಸಭಾಧ್ಯಕ್ಷ ಸ್ಥಾನಕ್ಕೆ ನೇಮಕ ಮಾಡುವ ಸಾಧ್ಯತೆಗಳಿವೆ ಎಂದು ಹೇಳಲಾಗಿದೆ.

ಪಕ್ಷದ ಹಿರಿಯ ನಾಯಕರಿಗೆ ಉಪ ಸಭಾಧ್ಯಕ್ಷರಿಗೆ ಸ್ಥಾನ ನೀಡಬೇಕಾಗಿರುವಕಾರಣಕೃಷ್ಣಾರೆಡ್ಡಿಅವರಿಗೆರಾಜೀನಾಮೆ ನೀಡುವಂತೆ ಮುಖ್ಯಮಂತ್ರಿಗಳು ಮನವಿ ಮಾಡಿದ್ದಾರೆ. ಅಲ್ಲದೇ, ಕೃಷ್ಣಾರೆಡ್ಡಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಕೆಲವು ಬಿಜೆಪಿ ನಾಯಕರು ಸಿದ್ಧತೆ ಕೂಡ ನಡೆಸಿದ್ದಾರೆ. ಹೀಗಾಗಿ ಮುಜುಗರದಿಂದ ತಪ್ಪಿಸಿಕೊಳ್ಳಲು ಕೃಷ್ಣಾರೆಡ್ಡಿ ಅವರೇ ರಾಜೀನಾಮೆ ನೀಡಲು ಮುಂದಾಗಿದ್ದಾರೆ ಎಂದು ಮೂಲಗಳು ಹೇಳಿವೆ.

ಬಜೆಟ್ ಅಧಿವೇಶನ ಮುಗಿಯುವವರೆಗೆ ಉಪಸಭಾಧ್ಯಕ್ಷ ಸ್ಥಾನದಲ್ಲಿ ಮುಂದುವರಿಯುವ ಇಚ್ಛೆಯನ್ನು ಕೃಷ್ಣಾರೆಡ್ಡಿ ಹೊಂದಿದ್ದರು. ಆದರೆ, ಸರ್ಕಾರದಒತ್ತಡಇರುವಕಾರಣರಾಜೀನಾಮೆಗೆ ನಿರ್ಧರಿಸಿದ್ದಾರೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಕೃಷ್ಣಾರೆಡ್ಡಿಗೆ ಅವಿಶ್ವಾಸ ನೋಟಿಸ್ ನೀಡಲು ಮುಂದಾಗಿದ್ದ ಬಿಜೆಪಿ ಈಗ ಹಿಂದೆ ಸರಿದಿದೆ ಎಂದು ತಿಳಿದುಬಂದಿದೆ.

ಆನಂದ್ ಮಾಮನಿ ಅವರು ಟ್ವೀಟರ್‌ನಲ್ಲಿ ಪಕ್ಷದ ವರಿಷ್ಠರ ವಿರುದ್ಧ ಬೇಸರ ವ್ಯಕ್ತಪಡಿಸಿದ್ದರು. ಪಕ್ಷದಲ್ಲಿ ನಿಷ್ಠರಿಗೆ ಕಾಲವಿಲ್ಲವೇ ಎಂಬುದು ಯಕ್ಷಪ್ರಶ್ನೆ. ಪಕ್ಷದಲ್ಲಿ ನಡೆಯುತ್ತಿರುವ ಬೆಳವಣಿಗೆ ನಿಷ್ಠರಿಗೆ ಮತ್ತು ಮತದಾರರಿಗೆ ಆದ ಅಪಮಾನವಲ್ಲದೇ ಇನ್ನೇನು? ಮುಂದಿನ ನಡೆ ವಿಚಾರ ಮಾಡುವಂತಾಗಿದೆ ಎಂದು ಟ್ವೀಟರ್‌ನಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದರು.

ಈ ಹಿನ್ನೆಲೆಯಲ್ಲಿ ಅಸಮಾಧಾನ ಶಮನಕ್ಕಾಗಿ ಆನಂದ್ ಮಾಮನಿ ಅವರಿಗೆ ವಿಧಾನಸಭೆ ಉಪಸಭಾಧ್ಯಕ್ಷ ಸ್ಥಾನ ನೀಡಲು ಬಿಜೆಪಿ ವರಿಷ್ಠರು ಮುಂದಾಗಿದ್ದಾರೆ ಎಂದು ಹೇಳಲಾಗಿದೆ.